# ಕರ್ನಾಟಕ ಸರ್ಕಾರ

ಸಂ:ಸಕನಿ/ಸಿಬ್ಬಂದಿ 3/ಸಿಆರ್- 45/2021-22

ಸಮಾಜ ಕಲ್ಯಾಣ ಆಯುಕ್ತರ ಕಛೇರಿ.
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 03/01/2022

## ಅಧಿಕೃತ ಜ್ಞಾಪನ

**ವಿಷಯ** : ಸಮಾಜ ಕಲ್ಯಾಣ ಇಲಾಖೆಯ ಹಿರಿಯ ವಾಹನ ಚಾಲಕರ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿ:31-12-2021 ಕ್ಕೆ ಅಂತ್ಯಗೊಂಡಂತೆ ದಿ:01-01-2022 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

ಉಲ್ಲೇಖ:
1 ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957
2 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 48 ಎಸ್ಎಸ್ಆರ್ 75 ದಿ:05-07-1976
3 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 43 ಸೇನೆನಿ 87 ದಿ:14-12-1987
4 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 07 ಸೇನೆನಿ 96 ದಿ:16-07-1996
5 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 32 ಸೇನೆನಿ 2003 ದಿ:10-06-2003
6 ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 3 ಎಸ್ಆರ್ಎಸ್ 2019 ದಿ:04-06-2019
7 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿ:10-12-2021

*******

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957 ರ ನಿಯಮ 10 ರಡಿ ಜೇಷ್ಠತಾ ನಿಯಮಗಳನ್ನು ಅನುಸರಿಸಿ ಪ್ರತಿಯೊಂದು ವೃಂದದ ಜೇಷ್ಠತಾ ಪಟ್ಟಿಯನ್ನು ಪ್ರತಿ ವರ್ಷ ನೇಮಕಾತಿ ಪ್ರಾಧಿಕಾರವು ಸಿದ್ಧಪಡಿಸಬೇಕಾಗಿರುತ್ತದೆ.

ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಸಂಬಂಧಿಸಿದಂತೆ, ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಎರಡು ಮೂಲಗಳಿಂದ ಭರ್ತಿ ಮಾಡಲು ಅನುಪಾತ(Quota) ನಿಗದಿಪಡಿಸಿರುವಲ್ಲಿ, ನಿಗದಿತ ಅನುಪಾತದ ಪ್ರಕಾರ ನೇರ ನೇಮಕಾತಿ ಮತ್ತು ಮುಂಬಡ್ತಿ ಪಾಲಿನ ಹುದ್ದೆಗಳನ್ನು ಭರ್ತಿ ಮಾಡಲು ರಿಕ್ತ ಸ್ಥಾನ ಆಧಾರಿತವಾಗಿ ವರ್ಗೀಕರಣ ಮಾಡುವ ಕುರಿತು ಉಲ್ಲೇಖ(2) ಮತ್ತು (3) ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ಮಾರ್ಗಸೂಚನೆಗಳನ್ನು ನೀಡಲಾಗಿರುತ್ತದೆ.

ಸದರಿ ಮಾರ್ಗಸೂಚಿಗಳಿಗೆ ಅನುಗುಣವಾಗಿ ಉಲ್ಲೇಖ(1) ರ ಸರ್ಕಾರಿ ನೌಕರರ ಜೇಷ್ಠತೆ ನಿಯಮಗಳನ್ವಯ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಉಲ್ಲೇಖ(4) ರಿಂದ (6)ವರೆಗಿನ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ನಮೂನೆಯನ್ನು ನಿಗದಿಪಡಿಸಲಾಗಿದೆ.